# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 1481 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀಮತಿ ಎಸ್. ವೀಣಾ ಅಚ್ಚಯ್ಯ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ತೋಟಗಾರಿಕೆ ಮತ್ತು ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |
| ಉತ್ತರಿಸಬೇಕಾದ ದಿನಾಂಕ | 24.09.2021 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪಶ್ಚಿಮ ಘಟ್ಟ ಪ್ರದೇಶದ ವ್ಯಾಪ್ತಿಯಲ್ಲಿರುವ ಕೊಡಗಿನಲ್ಲಿ ಉತ್ಪಾದನೆಯಾಗುವ ಜೇನುತುಪ್ಪಕ್ಕೆ ದೇಶ, ವಿದೇಶಗಳಲ್ಲಿ ಅಪಾರ ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪಶ್ಚಿಮ ಘಟ್ಟ ಪ್ರದೇಶದ ವ್ಯಾಪ್ತಿಯಲ್ಲಿರುವ ಕೊಡಗಿನಲ್ಲಿ ಉತ್ಪಾದನೆಯಾಗುವ ಜೇನುತುಪ್ಪವೂ ಸೇರಿದಂತೆ, ಭಾರತ ದೇಶದ ಉತ್ಪನ್ನವಾದ ಭಾರತೀಯ ಜೇನುತುಪ್ಪ (Indian Honey) ಕ್ಕೆ ದೇಶ ವಿದೇಶಗಳಲ್ಲಿ ಅಪಾರ ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆ. |
| ಆ | ಬಂದಿದ್ದಲ್ಲಿ, ಕೊಡಗು ಜಿಲ್ಲೆಯಲ್ಲಿ ಜೇನುಕೃಷಿ ಉತ್ತೇಜನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕೊಡಗು ಜಿಲ್ಲೆಯಲ್ಲಿ ಜೇನುಕೃಷಿ ಉತ್ತೇಜನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿದೆ.<br>1. ರಾಜ್ಯವಲಯ ಮಧುವನ ಮತ್ತು ಜೇನುಸಾಕಾಣಿಕೆ ಅಭಿವೃದ್ಧಿ ಯೋಜನೆ ಹಾಗೂ ಜಿಲ್ಲಾವಲಯ ಜೇನುಸಾಕಾಣಿಕೆ ಯೋಜನೆಗಳಡಿ ಜೇನು ಕೃಷಿ ಕೈಗೊಳ್ಳಲು ಆಸಕ್ತಿ ಹೊಂದಿರುವ ರೈತರು / ರೈತ ಮಹಿಳೆಯರು ಹಾಗೂ ಇತರ ಆಸಕ್ತರಿಗೆ ಐದು ದಿನಗಳ ಅವಧಿಯ ಜೇನುಕೃಷಿ ತರಬೇತಿಯನ್ನು ನೀಡಲಾಗುತ್ತಿದೆ.<br>2. ರಾಜ್ಯವಲಯ ಮತ್ತು ಜಿಲ್ಲಾ ವಲಯ ಯೋಜನೆಗಳಡಿ ಫಲಾನುಭವಿಗಳಿಗೆ ಪ್ರತಿ ಜೇನು ಪೆಟ್ಟಿಗೆ, ಕುಟುಂಬ ಮತ್ತು ಸ್ಟ್ಯಾಂಡ್ ಖರೀದಿಗೆ ಸಾಮಾನ್ಯ ರೈತರಿಗೆ ಶೇ.75 ರಂತೆ ರೂ.3375/- ಮತ್ತು ಪರಿಶಿಷ್ಟ ಜಾತಿ / ಪಂಗಡದ ರೈತರಿಗೆ ಶೇ.90 ರಂತೆ ರೂ.4050/- ಗಳ ಸಹಾಯಧನ ನೀಡಲಾಗುತ್ತಿದೆ. ಪ್ರತಿ ಫಲಾನುಭವಿ ಗರಿಷ್ಠ 10 ಜೇನು ಪೆಟ್ಟಿಗೆ, ಕುಟುಂಬ ಮತ್ತು ಸ್ಟ್ಯಾಂಡ್ ಗಳಿಗೆ ಸಹಾಯಧನ ಪಡೆಯಬಹುದಾಗಿದೆ.<br>3. ಕೇಂದ್ರ ವಲಯ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಜೇನು ಪೆಟ್ಟಿಗೆ ಮತ್ತು ಕುಟುಂಬ ಖರೀದಿಗೆ ಸಾಮಾನ್ಯ ರೈತರಿಗೆ ಶೇ.40 ರಂತೆ ರೂ.2000/- ಮತ್ತು ಪರಿಶಿಷ್ಟ ಜಾತಿ / ಪಂಗಡದ ರೈತರಿಗೆ ಶೇ.90 ರಂತೆ ರೂ.3600/- ಗಳ ಸಹಾಯಧನ ನೀಡಲಾಗುತ್ತಿದೆ. ಪ್ರತಿ ಫಲಾನುಭವಿ ಗರಿಷ್ಠ 50 ಜೇನು ಪೆಟ್ಟಿಗೆ ಮತ್ತು ಕುಟುಂಬಗಳಿಗೆ ಸಹಾಯಧನ ಪಡೆಯಬಹುದಾಗಿದೆ. |

| | | |
|---|---|---|
| | | 4. ರಾಜ್ಯವಲಯ ಯೋಜನೆಯಡಿ ಜೇನುಸಾಕಣೆಯನ್ನು ಉದ್ಯಮವಾಗಿ ಪ್ರಾರಂಭಿಸಲು ಆಸಕ್ತಿ ಹೊಂದಿರುವ ಫಲಾನುಭವಿಗಳಿಗೆ ಮಧುವನ ಸ್ಥಾಪನೆಗೆ ಶೇ:75ರಂತೆ ರೂ.75,000/-ಗಳ ಸಹಾಯಧನ ನೀಡಲಾಗುತ್ತಿದೆ.<br>5. ಕೊಡಗು ಜಿಲ್ಲೆಯ ಭಾಗಮಂಡಲ ಸರ್ಕಾರಿ ಜೇನು ಕೃಷಿ ತಾಂತ್ರಿಕ ತರಬೇತಿ ಕೇಂದ್ರದಲ್ಲಿ ರಾಜ್ಯದ ರೈತ ಮಕ್ಕಳಿಗೆ 3 ತಿಂಗಳ ಅವಧಿಯ ವಸತಿ ಸಹಿತ ಪ್ರಮಾಣ ಪತ್ರ ಜೇನುಕೃಷಿ ತರಬೇತಿಯನ್ನು ನೀಡಲಾಗುತ್ತಿದೆ.<br>6. ಕೊಡಗು ಜಿಲ್ಲೆಯಲ್ಲಿ ಜೇನುಕೃಷಿ ಉತ್ತೇಜನಕ್ಕಾಗಿ ಶ್ರೀ ಭಗಂಡೇಶ್ವರ ತೋಟಗಾರಿಕೆ ಉತ್ಪಾದಕರ ಕಂಪನಿ.ಲಿ ಎಂಬ ರೈತ ಉತ್ಪಾದಕ ಸಂಸ್ಥೆಯನ್ನು ಭಾಗಮಂಡಲದಲ್ಲಿ 1060 ಸದಸ್ಯ ರೈತರನ್ನು ಒಳಗೊಂಡಂತೆ 2016 ರಲ್ಲಿ ತೋಟಗಾರಿಕೆ ಇಲಾಖೆಯ ನೆರವಿನಿಂದ ಪ್ರಾರಂಭಿಸಲಾಗಿದೆ. ಸದರಿ ರೈತ ಉತ್ಪಾದಕ ಸಂಸ್ಥೆಯ ವತಿಯಿಂದ ಸದಸ್ಯ ರೈತರಿಗೆ ಜೇನುಕೃಷಿ ಕುರಿತಂತೆ ತರಬೇತಿಯನ್ನು ನೀಡಲಾಗುತ್ತಿದೆ. ಸದಸ್ಯ ರೈತರು ಉತ್ಪಾದಿಸಿದ ಜೇನುತುಪ್ಪವನ್ನು ಸಂಸ್ಥೆಯು ಸಂಗ್ರಹಿಸಿ ಸಂಸ್ಥೆಯ ಬ್ರ್ಯಾಂಡ್ ಹೆಸರಿನೊಂದಿಗೆ ಪ್ಯಾಕಿಂಗ್ ಮಾಡಿ ವಿವಿಧ ಮಾರಾಟ ಮೇಳಗಳಲ್ಲಿ ಭಾಗವಹಿಸಿ ಮಾರಾಟ ಮಾಡುತ್ತಿದೆ. |
| ಈ | ಕೊಡಗು ಜಿಲ್ಲೆಯಲ್ಲಿ ಜೇನುಕೃಷಿ ಅಭಿವೃದ್ಧಿಗೆ ಸರ್ಕಾರ ವಿಶೇಷ ಅನುದಾನ ಒದಗಿಸಲು ಕ್ರಮ ಕೈಗೊಳ್ಳುವುದೇ? | ಕೊಡಗು ಜಿಲ್ಲೆಯಲ್ಲಿ ಜೇನುಕೃಷಿ ಅಭಿವೃದ್ಧಿಗೆ ವಿಶೇಷ ಅನುದಾನ ಒದಗಿಸುವ ಪ್ರಸ್ತಾವ ಪ್ರಸ್ತುತ ಇರುವುದಿಲ್ಲ. |

**No.HORTI 436 HGM 2021**

(ಮುನಿರತ್ನ)
ತೋಟಗಾರಿಕೆ ಮತ್ತು ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.